**ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ**

C.C No.02/2016
CW-03 PW-09

ಹೆಸರು : ಸುರೇಶ ಹರಿಜನ

ತಂದೆ ಹೆಸರು : ಸಾಬಣ್ಣಾ

ವಯಸ್ಸು : 64 ವರ್ಷ

ಉದ್ಯೋಗ : ಕೂಲಿಕೆಲಸ

ವಾಸ ಸ್ಥಳ : ಸೇಡಂ

---

**ಪ್ರಮಾಣವಚನ ಭೋಧಿಲಾಯಿತು. ದಿಃ 20-12-2023**

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ**

ನನಗೆ ಚಾಸಾಃ 02 ರವರ ಪರಿಚಯ ಇರುತ್ತದೆ. ಈ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

ಸುಮಾರು 15 ವರ್ಷಗಳ ಹಿಂದೆ ನಾನು ಠಾಣೆಗೆ ಹೋದಾಗ ಪೊಲೀಸರು ಒಂದು ದಾಖಲೆಗೆ ನನ್ನ ಸಹಿಯನ್ನು ಪಡೆದಿದ್ದರು. ಸಾಕ್ಷಿಯು ನಿಪಿ-11 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-11 (ಬಿ) ಎಂದು ಗುರುತಿಸಲಾಯಿತು. ನಿಪಿ-11 ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಮತ್ತು ನನಗೆ ಯಾವುದೇ ಸ್ಥಳವನ್ನು ಪೊಲೀಸರು ತೋರಿಸಿರುವುದಿಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ**

ದಿಃ 18-10-2006 ರಂದು ಬೆಳಿಗ್ಗೆ 10.00 ರಿಂದ 11.00 ಗಂಟೆ ಸಮಯದವರೆಗೆ ಪೊಲೀಸರು ನನ್ನ ಸಮಕ್ಷಮ ನಿಪಿ-11 ರಂತೆ ಪಂಚನಾಮೆ ಕ್ರಮ ಜರುಗಿಸಿ, ನನಗೆ ಘಟನಾ ಸ್ಥಳವನ್ನು ತೋರಿಸಿ, ನಿಪಿ-

11 ರಲ್ಲಿ ಬರೆದಿರುವ ವಿಷಯಗಳನ್ನು ನನಗೆ ಓದಿ ಹೇಳಿ, ನಂತರ ನಿಪಿ-11 ಕ್ಕೆ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-11 ರಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುತ್ತವೆ ಎಂದರೆ ಸರಿಯಲ್ಲ. ಆರೋಪಿಗಳಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 1 ಮತ್ತು 2 ನೇ ಆರೋಪಿಗಳ ಪರ ಶ್ರೀ.ಎಂ.ಎಂ.ಪಿ. ಹಾಗೂ ಎಸ್.ಎಂ. ವಕೀಲರಿಂದ - ಏನು ಇಲ್ಲಾ**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು, ಚಿತ್ತಾಪೂರ.